---

**2022–23 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಉತ್ತಮಪಡಿಸಲು ರಚಿಸಲಾಗಿರುವ ಅಭ್ಯಾಸ ಪತ್ರಿಕೆಗಳು**

**ವಿಷಯ: 01 K–ಪ್ರಥಮ ಭಾಷೆ – ಕನ್ನಡ**

**ಗರಿಷ್ಠ ಅಂಕಗಳು: 100** **ಸಮಯ : 03.15ಗಂಟೆಗಳು**

**************************************************************************************

**ಅಭ್ಯಾಸ ಪತ್ರಿಕೆ–3**

**************************************************************************************

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** **6x1=6**

1. 'ಗುರೂಪದೇಶ' ಪದವು ಈ ಸಂಧಿಗೆ ಸೇರಿದೆ
   ಎ) ಆಗಮ ಬಿ) ಆದೇಶ
   ಸಿ) ಸವರ್ಣದೀರ್ಘ ಡಿ) ಯಣ್
2. ಒಬ್ಬರು ಹೇಳಿದ ಮಾತನ್ನೇ ಯಥಾವತ್ತಾಗಿ ಬರೆಯುವಾಗ ಬಳಸುವ ಲೇಖನ ಚಿಹ್ನೆ
   ಎ) ಪೂರ್ಣ ವಿರಾಮ ಬಿ) ಅಲ್ಪ ವಿರಾಮ
   ಸಿ) ಅರ್ದ ವಿರಾಮ ಡಿ) ಉದ್ಧರಣ
3. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥ ವಾಕ್ಯವನ್ನು
   ಎ) ಸಂಯೋಜಿತ ವಾಕ್ಯ ಬಿ) ಮಿಶ್ರ ವಾಕ್ಯ
   ಸಿ) ಸಂಯುಕ್ತ ವಾಕ್ಯ ಡಿ) ಸಾಮಾನ್ಯ ವಾಕ್ಯ
4. ಸಪ್ತಮಿ ವಿಭಕ್ತಿಯಕಾರಕಾರ್ಥ
   ಎ) ಕರಣಾರ್ಥ ಬಿ) ಅಧಿಕರಣ
   ಸಿ) ಸಂಪ್ರದಾನ ಡಿ) ಅಪಾದಾನ
5. ಸಂಬಂಧಾರ್ಥಕಾವ್ಯಯಕ್ಕೆ ಉದಾಹರಣೆಯಿದು
   ಎ) ನೀನೇ ಬಿ) ಸಾಕು
   ಸಿ) ಬೇಗನೆ ಡಿ) ಆದ್ದರಿಂದ
6. 'ಮಾಡು' ಧಾತುವಿನ ನಿಷೇಧಾರ್ಥಕಕ್ರಿಯಾರೂಪ
   ಎ) ಮಾಡುವನು ಬಿ) ಮಾಡನು
   ಸಿ) ಮಾಡಿಯಾನು ಡಿ) ಮಾಡೋಣ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4x1=4**

7. ಮೊತ್ತಮೊದಲು : ದ್ವಿರುಕ್ತಿ : : ಗುಡಿಗೋಪುರ : ______________
8. ಕಂಗೆಡು :ಕ್ರಿಯಾಸಮಾಸ : : ನೆಯ್ದುವಸ್ತ್ರ: ________________
9. ದ್ಯೂತ :ಜೂಜು : : ವಿದ್ಯಾಧರ : ________________________
10. ಬಳೆಗಾರ :ತದ್ಧಿತಾಂತನಾಮ : : ಮಾಟ : _________________

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7x1=7**

11. ಯಾವುದು ಎಂದೆಂದೂ ನಮ್ಮ ಆದರ್ಶವಾಗಿರಬೇಕು?
12. ಇಂದಲ್ಲ–ನಾಳೆ ಫಲ ಕೊಡುವ ಅಂಶಗಳಾವುವು?
13. ಧರ್ಮಎಂದುನಮ್ಮ ಪರಂಪರೆಯಾವುದನ್ನು ಒಕ್ಕಣಿಸಿದೆ?
14. ದುಷ್ಟಬುದ್ಧಿಯುತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?
15. ಯಾವುದನ್ನು ಎಚ್ಚರದಲಿ ಮುನ್ನಡೆಸಬೇಕು?

16. ದಿನಪಸುತ ಎಂದರೆ ಯಾರು?
17. ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **10x2=20**

18. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ವಿವರಿಸಿ.?
19. ವ್ಯಕ್ತಿಗಳನ್ನು ಆದರ್ಶವಾಗಿ ಸ್ವೀಕರಿಸಲು ಇರುವ ತೊಡಕುಗಳೇನು?
20. ಸ್ವಧರ್ಮವುಯಾವುದನ್ನು ಅವಲಂಬಿಸಿದೆ?
21. ಧರ್ಮಾಧಿಕರಣರು ವಟವೃಕ್ಷಕ್ಕೆ ಏನು ಹೇಳಿದರು?
22. ಹಡಗನ್ನು ಯಾವುದರ ಬೆಳಕಿನಲ್ಲಿ ಮುನ್ನಡೆಸಬೇಕಿದೆ?
23. ದ್ರುಪದನು ದ್ರೋಣರಿಗೆ ಗರ್ವದಿಂದ ಹೇಳಿದ ಮಾತುಗಳು ಯಾವುವು?
24. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು?
25. ಜಲಿಯನ್ ವಾಲಾಭಾಗ್‌ನಲ್ಲಿರುವ ಒಕ್ಕಣೆ ಏನು?
26. ಸ್ವದೇಶೀ ಆರ್ಥಿಕತೆ ಬಲಪಡಿಸಲು ಹಬ್ಬಗಳಲ್ಲಿ ಸ್ವದೇಶೀ ವಸ್ತುಗಳನ್ನೇ ಬಳಸಲು ಪ್ರಾರಂಭಿಸಬೇಕು – ಈ ಕುರಿತು ನಿಮ್ಮ ಅಭಿಪ್ರಾಯವೇನು?
27. ಮುದ್ದಣ ಕವಿ ಲೇಖಕರಿಗೆ ಏನೆಂದು ಸಲಹೆ ಕೊಟ್ಟರು?

**V. ಕೆಳಗಿನ ಕವಿಗಳ/ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು/ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ** **2x3=6**

28. ಪು.ತಿ. ನರಸಿಂಹಾಚಾರ್
29. ಕುವೆಂಪು

**VI. ಕೆಳಗಿನ ಪದ್ಯ ಭಾಗಕ್ಕೆ ಪ್ರಸ್ತಾರ ಹಾಕಿ ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ.** **1x3=3**

30. ಉರ್ವಿಯೊಳ್ ಕೌಸಲ್ಯೆ ಪಡೆದಕುವರಂರಾಮ ।
ನೊರ್ವನೇ ವೀರನಾತನಯಜ್ಞತುರಗಮಿದು ।
ನಿರ್ವಹಿಸಲಾರ್ಪರಾರಾದೊಡಂತಡೆಯಲೆಂದಿರ್ದ ಲೇಖನವನೋದಿ

**VII. ಕೆಳಗಿನ ವಾಕ್ಯದಲ್ಲಿರುವಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ.** **1x3=3**

31. ಅಚ್ಛೋದ ಸರೋವರವುತ್ರೈಲೋಕ್ಯಲಕ್ಷ್ಮಿಯುತನ್ನ ಸೌಂದರ್ಯವನ್ನು ನೋಡಲು ಮಾಡಿಟ್ಟರನ್ನಗನ್ನಡಿಯೋ ಎಂಬಂತೆ ಶೋಭಿಸಿತು.

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** **1x3=3**

32. ಆಳಾಗಬಲ್ಲವನು; ಅರಸನಾಗಬಲ್ಲನು.

**ಅಥವಾ**

ಹೆತ್ತ ತಾಯಿ; ಹೊತ್ತ ನಾಡು ಸ್ವರ್ಗಕ್ಕಿಂತ ಮಿಗಿಲು.

**IX ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **6x3=18**

33. "ತಾವುಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ."
34. "ಸಂಪತ್ತು ಸಿಕ್ಕಿತು ಎಂದ ಮಾತ್ರಕ್ಕೆಯೆ ಸುಖವುಂಟೆ?"
35. "ಈ ಸಮಷ್ಟಿ ಮನಸ್ಸಲ್ಲಿಎಲ್ಲರೂಇರುತ್ತಾರೆ."
36. "ನಾಲ್ಕು ಮಂದಿ ಹಿಂಗ ಕಡಿದು ಸತ್ತರೊ ಹಲಗಲಿ ಬಂಟರಣ್ಣಜನಕ"
37. "ರವಿಸುತನಕಿವಿಯಲಿ ಬಿತ್ತಿದನು ಭಯವ"
38. "ಪಾಂಡವರೊಳಿಜಿದು ಛಲಮನೆ ಮೆರೆವೆಂ."

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1x4=4**

39. ನೀಲಮೇಘಮಂಡಲ..............................
..........................................................
..........................................................
..........................................................
ಹಕ್ಕಿ ಹಾರುತಿದೆ ನೋಡಿದಿರಾ ?

**ಅಥವಾ**

ಯುಗ–ಯುಗಗಳ ...............................

.......................................................

.....................................................

.....................................................

ಹಕ್ಕಿ ಹಾರುತಿದೆ ನೋಡಿದಿರಾ?

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1x4=4**

ಎನ್ನಣುಗಾಳನೆನ್ನಣುಗದಮ್ಮನನಿಕ್ಕಿದ ಪಾರ್ಥಭೀಮರು।
ಳ್ಳನ್ನೆಗಮೊಲ್ಲೆನೆನ್ನೊಡಲೊಳೆನ್ನ ಸುವುಳ್ಳಿನಮಜ್ಜ ಸಂಧಿಯಂ॥
ಮುನ್ನಮವಂದಿರಿರ್ಬರುಮನಿಕ್ಕುವೆನಿಕ್ಕಿ ಬಟಿಕ್ಕೆ ಸಂಧಿಗೆ।
ಯ್ವೊನ್ನೆಗಟ್ಟಿಂತಕಾತ್ಮಜನೊಳೆನ್ನಟಿಲಾಜಿದೊಡಾಗದೆಂಬೆನೇ॥

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **2x4=8**

41. ಶಬರಿಯ ಚಿಂತೆ ಹಿಂಗಿ ಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.

**ಅಥವಾ**

ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ?

42. ದ್ರುಪದನಿಗೂ ದ್ರೋಣನಿಗೂ ನಡೆದ ಸಂಭಾಷಣೆಯನ್ನು ಸಂಕ್ಷಿಪ್ತವಾಗಿ ಬರೆಯಿರಿ?

**ಅಥವಾ**

ದ್ರೋಣನೂ ದ್ರುಪದನ ವಿರುದ್ಧ ಶಪಥ ಮಾಡಲು ಕಾರಣವಾದ ಅಂಶಗಳನ್ನು ವಿವರಿಸಿ?

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** **1x4=4(2+2)**

43. ಇಡೀ ಕನ್ನಡ ಸಾಹಿತ್ಯಕ್ಕೆ ವಿಶ್ವಮುಖಿ ಶಕ್ತಿ ಬಂದದ್ದು– 12ನೇ ಶತಮಾನದ ವಚನಕಾರರಿಂದ, 900 ವರ್ಷಗಳ ಹಿಂದೆಯೇ ಕನ್ನಡದ ವಚನವಾರಿಧಿ ತುಂಬಿ ತುಳುಕಿ ನೆರೆಹೊರೆಗೆಲ್ಲಾ ತನ್ನ ಸಾಹಿತ್ಯಕ ನರುಗಂಪನ್ನು ಪಸರಿಸಿದ್ದು ಐತಿಹಾಸಿಕ ದಾಖಲೆ. ಅಲ್ಲಮಪ್ರಭುವಿನ ಅಧ್ಯಕ್ಷತೆಯಲ್ಲಿ ನಡೆಯುತ್ತಿದ್ದ ಅನುಭವ ಮಂಟಪ ಮಾದರಿ ಪಾರ್ಲಿಮೆಂಟಿನಂತೆ ವಿಶ್ವವಿಖ್ಯಾತವಾಗಿದೆ. ಭಕ್ತಿ ಭಂಡಾರಿ ಬಸವಣ್ಣ ಅವರು ಕೈ ಗೊಂಡ ಸಾಮಾಜಿಕ ಕಾರ್ಯಗಳು ಅಂದಿನ ಆಡಳಿತಗಾರರ ಸಮಾಜಮುಖಿಧೋರಣೆಯನ್ನು ಸೂಚಿಸುತ್ತವೆ. ಎಲ್ಲ ವಚನಕಾರರಿಗೂ ಅನುಭವ ಮಂಟಪದಲ್ಲಿ ತಮ್ಮ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವ ಸ್ವಾತಂತ್ರ್ಯವಿತ್ತು. ವಚನ ಹೇಳಲು ಸಂಪೂರ್ಣ ಸ್ವಾತಂತ್ರ್ಯವಿತ್ತು. ಹೀಗಾಗಿ ಸರ್ವದ ಏಳಿಗೆಗೂ ಅದು ನಾಂದಿಯಾಯಿತು.

ಸಾಮಾಜಿಕ ನ್ಯಾಯದ ಪರಿಕಲ್ಪನೆ ಮೂಡಿ ಅದು ಸಾಕಾರವಾಗಿ ಅಸ್ತಿತ್ವಕ್ಕೆ ಬಂದು ಆದರ್ಶವಾಗಿ ಪರಿಪಾಲನೆಯಾದದ್ದು ಇದೇ ಸಂದರ್ಭದಲ್ಲಿ, ಆಗಿನ ಸಮಾಜ ಸ್ವಾಸ್ಥ್ಯವನ್ನು ಮಾದರಿಯಾಗಿ ನಾವೆಲ್ಲಾ ಅನುಸರಿಸುವುದು ಒಳಿತು. ಸಿದ್ಧರಾಮ, ಚೆನ್ನಬಸವಣ್ಣ, ಮಾದಾರಚೆನ್ನಯ್ಯ, ಡೋಹರಕಕ್ಕಯ್ಯ, ಮೋಳಿಗೆ ಮಾರಯ್ಯ, ಹರಳಯ್ಯ, ಸಂಕವ್ವ ಮುಂತಾಗಿ ನೂರಾರು ವಚನಕಾರರು ಒಂದು ವಿನೂತನವಾದ ಹಾದಿಯನ್ನೇ ತೆರೆದರು. ಇಂದಿಗೂ ಅದು ನಮಗೆ ಬೆನ್ನ ಹಿಂದಿನ ನೆಚ್ಚಿನ ಹೊಂಬೇಕಾಗಿರುವುದು ಸ್ಮರಣೀಯ,ಅನುಸರಣೀಯಕೂಡ.

**ಪ್ರಶ್ನೆಗಳು:**

ಅ) ಸಮಕಾಲೀನ ಸಂದರ್ಭದಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆ ಮೂಡಿಸಲು ವಚನ ಸಾಹಿತ್ಯದ ಔಚಿತ್ಯವೇನು?

ಆ) ವಚನ ಸಾಹಿತ್ಯವು ಸರ್ವರ ಏಳಿಗೆಗೆ ಹೇಗೆ ನಾಂದಿಯಾಯಿತು?

**XIV.ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** **1x5=5**

44. ನಿಮ್ಮನ್ನು ವಿಜಯನಗರ ಜಿಲ್ಲೆಯ ನಿವಾಸಿ 'ಪ್ರಥಮ್' ಎಂದು ಭಾವಿಸಿಕೊಂಡು, ನಿಮ್ಮ ಊರಿನಲ್ಲಿ ಗ್ರಂಥಾಲಯವನ್ನು ಸ್ಥಾಪಿಸುವಂತೆ ಕೋರಿ, ನಿಮ್ಮ ಶಾಸಕರಿಗೆ ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ತಾಲ್ಲೂಕಿನ ಹಿರೇಕಬ್ಬಾರನ ಸರ್ಕಾರಿ ಪ್ರೌಢಶಾಲೆಯ 'ಕೃತಿಕಾ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ವಿವರಿಸಿ, ಮೈಸೂರಿನಕುವೆಂಪುನಗರದಲ್ಲಿ ವಾಸವಾಗಿರುವ 'ಅದಿತ್' ಎಂಬ ಹೆಸರಿನಗೆಳೆಯನಿಗೆ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ. 1x5=5**

45. ಶಾಲಾ ಇಕೋ–ಕ್ಲಬ್‌ನ ಕಾರ್ಯಚಟುವಟಿಕೆಗಳು.

**ಅಥವಾ**

ಅಂತರ್ಜಲ ಸಂರಕ್ಷಣೆಯ ಮಹತ್ವ

※※※※※